SDUAHER

DECCAN HERALD

Online Newspaper Clipping Service
**Dtd- Sunday, 25th, March- 2018**



# Deemed varsities need AICTE okay for admissions

## AICTE wants Delhi HC to hear plea

**NEW DELHI: The Supreme Court has restrained all deemed-to-be universities from taking any admission to engineering courses without prior approval from the All India Council for Technical Education.**

**November 3, 2017**
- SC says deemed-to-be universities can continue or commence engineering course only with prior approval from AICTE
- UGC, AICTE issue notices stating universities have to get AICTE approval
- Several institutes approach high courts
- Their contention is that SC verdict is confined to imparting education through distance mode only
- AICTE moves SC

**MARCH 24, 2018:** SC stays admissions without AICTE approval



A bench of Justices Adarsh Kumar Goel, R F Nariman and U U Lalit passed its order on a plea by the technical education regulator, AICTE.

"In the meanwhile, there will be stay on admissions without approval of the AICTE," the court ordered.

Additional Solicitor General Maninder Singh, representing the AICTE, contended that the apex court by its judgement in 'the Orissa Lift Irrigation Corporation Ltd' on November 3, last had clearly stated that it was impermissible to impart technical education through distance or correspondence mode.

It was held that deemed-to-be universities can continue or commence imparting of engineering course only with prior approval from the AICTE.

But after the UGC and AICTE issued public notice stating the universities concerned had to obtain approval from the AICTE if they wished to continue or commence engineering course in 2018-19, several of them approached the Punjab and Haryana, Rajasthan, Madras, Orissa and Andhra Pradesh and Telangana High Courts. Those institutes contended the apex court's judgement was confined to imparting education through distance mode only.

The AICTE sought a direction to transfer the pending writ petitions to Delhi High Court.

"In order to protect the interests of the gullible students so that they are not left in lurch subsequently, interim orders should be passed," the law officer contended.

**DH News Service**

# ಡೀಮ್ಡ್ ವಿ.ವಿ: ಎಂಜಿನಿಯರಿಂಗ್ ಪ್ರವೇಶಕ್ಕೆ ತಡೆ

ಪ್ರಜಾವಾಣಿ ವಾರ್ತೆ

ನವದೆಹಲಿ: ಅಖಿಲ ಭಾರತ ತಾಂತ್ರಿಕ ಶಿಕ್ಷಣ ಮಂಡಳಿ (ಎಐಸಿಟಿಇ) ಪೂರ್ವಾನುಮತಿ ಇಲ್ಲದೆ ಡೀಮ್ಡ್ ವಿಶ್ವ-ವಿದ್ಯಾಲಯಗಳು ಎಂಜಿನಿಯರಿಂಗ್ ಪದವಿ ಕೋರ್ಸ್‌ಗಳಿಗೆ ಪ್ರವೇಶ ನೀಡದಂತೆ ಸುಪ್ರೀಂ ಕೋರ್ಟ್ ತಡೆಯಾಜ್ಞೆ ನೀಡಿದೆ.

ಎಐಸಿಟಿಇ ಸಲ್ಲಿಸಿದ ಅರ್ಜಿಯ ವಿಚಾರಣೆ ನಡೆಸಿದ ಮೂವರು ಸದಸ್ಯರ ಪೀಠ ಈ ಆದೇಶ ಹೊರಡಿಸಿದೆ. 2018–19ನೇ ಸಾಲಿನ ಎಂಜಿನಿಯರಿಂಗ್ ಪದವಿ ಕೋರ್ಸ್‌ಗಳ ಪ್ರವೇಶಕ್ಕೆ ಈ ತಡೆಯಾಜ್ಞೆ ಅನ್ವಯಿಸುತ್ತದೆ ಎಂದು ಕೋರ್ಟ್ ಸ್ಪಷ್ಟಪಡಿಸಿದೆ.

'ಅಂಚೆ ತೆರಪಿನ ಶಿಕ್ಷಣ ಅಥವಾ ದೂರ ಶಿಕ್ಷಣದ ಮೂಲಕ ತಾಂತ್ರಿಕ ಶಿಕ್ಷಣ ನೀಡಲು ಸಾಧ್ಯವಿಲ್ಲ ಎಂದು ಕಳೆದ ನವೆಂಬರ್ 3ರಂದು ಸುಪ್ರೀಂ ಕೋರ್ಟ್ ಆದೇಶ ಹೊರಡಿಸಿತ್ತು' ಎಂದು ಎಐಸಿಟಿಇ ಪರ ವಕೀಲರು ನ್ಯಾಯಾಲಯದ ಗಮನಕ್ಕೆ ತಂದರು.

ಡೀಮ್ಡ್ ವಿಶ್ವವಿದ್ಯಾಲಯಗಳು ಎಐಸಿಟಿಇ ಅನುಮತಿ ಇಲ್ಲದೆ 2018–19ನೇ ಸಾಲಿನ ಎಂಜಿನಿಯರಿಂಗ್ ಪ್ರವೇಶ ನೀಡುವಂತಿಲ್ಲ ಎಂದು ವಿಶ್ವವಿದ್ಯಾಲಯ ಧನಸಹಾಯ ಆಯೋಗ (ಯುಜಿಸಿ) ಮತ್ತು ಎಐಸಿಟಿಇ ಪತ್ರಿಕಾ ಪ್ರಕಟಣೆ ನೀಡಿತ್ತು.

ಇದನ್ನು ಪ್ರಶ್ನಿಸಿ ಅನೇಕ ರಾಜ್ಯಗಳ ವಿಶ್ವವಿದ್ಯಾಲಯಗಳು ಆಯಾ ಹೈಕೋರ್ಟ್‌ಗಳ ಮೊರೆ ಹೋಗಿವೆ.

ಸುಪ್ರೀಂ ಕೋರ್ಟ್ ಆದೇಶ ಅಂಚೆ ತೆರಪಿನ ಮತ್ತು ದೂರ ಶಿಕ್ಷಣದ ಮೂಲಕ ನೀಡುವ ತಾಂತ್ರಿಕ ಶಿಕ್ಷಣಕ್ಕೆ ಮಾತ್ರ ಅನ್ವಯಿಸುತ್ತದೆ ಎಂದು ಈ ಶೈಕ್ಷಣಿಕ ಸಂಸ್ಥೆಗಳು ವಾದ ಮಂಡಿಸಿವೆ.

ಈ ಸಂಬಂಧ ವಿವಿಧ ರಾಜ್ಯಗಳ ಹೈಕೋರ್ಟ್‌ಗಳಲ್ಲಿ ಸಲ್ಲಿಸಿರುವ ರಿಟ್ ಅರ್ಜಿಗಳನ್ನು ದೆಹಲಿ ಹೈಕೋರ್ಟ್‌ಗೆ ವರ್ಗಾಯಿಸುವಂತೆ ನಿರ್ದೇಶನ ನೀಡಬೇಕು ಎಂದು ಎಐಸಿಟಿಇ ವಕೀಲರು ಮನವಿ ಮಾಡಿದರು.

ವಿದ್ಯಾರ್ಥಿಗಳ ಭವಿಷ್ಯವನ್ನು ದೃಷ್ಟಿ-ಯಲ್ಲಿಟ್ಟುಕೊಂಡು ನ್ಯಾಯಾಲಯ ಮಧ್ಯಂತರ ಆದೇಶ ನೀಡಬೇಕು ಎಂದು ಅವರು ಮನವಿ ಮಾಡಿದರು.

ಇದನ್ನು ಪುರಸ್ಕರಿಸಿದ ಸುಪ್ರೀಂ ಕೋರ್ಟ್ ಪೀಠವು ಎಂಜಿನಿಯರಿಂಗ್ ಪ್ರವೇಶಕ್ಕೆ ತಡೆಯಾಜ್ಞೆ ನೀಡಿತು.

# ನುರಿತ ಮಾನವ ಸಂಪನ್ಮೂಲಕ್ಕಾಗಿ ಮಾನದಂಡ

• ಪ್ರಜಾವಾಣಿ ವಾರ್ತೆ

ನವದೆಹಲಿ: ರಾಜ್ಯದಲ್ಲಿನ ವೈದ್ಯಕೀಯ ಶಿಕ್ಷಣ ಸಂಸ್ಥೆಗಳ ಅಗತ್ಯಕ್ಕೆ ಅನುಗುಣವಾಗಿ, ನುರಿತ ಮಾನವ ಸಂಪನ್ಮೂಲ ಹೊಂದುವ ಉದ್ದೇಶದಿಂದ ವೈದ್ಯಕೀಯ ಮತ್ತು ದಂತ ವೈದ್ಯಕೀಯ ಸ್ನಾತಕೋತ್ತರ (ಪಿ.ಜಿ) ಕೋರ್ಸ್‌ಗೆ ಕನ್ನಡೇತರ ವಿದ್ಯಾರ್ಥಿಗಳ ಪ್ರವೇಶಕ್ಕೆ ಮಾನದಂಡ ರೂಪಿಸಲಾಗಿದೆ ಎಂದು ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್ ಎದುರು ಸಮರ್ಥನೆ ನೀಡಿದೆ.

ವೈದ್ಯಕೀಯ ಪಿ.ಜಿ. ಕೋರ್ಸ್ ಪ್ರವೇಶಕ್ಕಾಗಿ ಕರ್ನಾಟಕದ ಹಾಗೂ ರಾಜ್ಯದಲ್ಲಿ 10 ವರ್ಷ ಶಿಕ್ಷಣ ಪಡೆದಿರುವ ಅರ್ಹತೆಯ ಆಧಾರದಲ್ಲಿ ಸರ್ಕಾರಿ ಸೀಟುಗಳನ್ನು ಮೀಸಲಿರಿಸಿರುವ ಸರ್ಕಾರದ ಕ್ರಮ ವಿರೋಧಿಸಿ ಡಾ.ಕೃತಿ ಲಖಿನಾ ಸೇರಿದಂತೆ 39 ಕನ್ನಡೇತರ ವಿದ್ಯಾರ್ಥಿಗಳು ಸಲ್ಲಿಸಿರುವ ಮೇಲ್ಮನವಿ ಕುರಿತು ರಾಜ್ಯ ಸರ್ಕಾರ ಸುಪ್ರೀಂ ಕೋರ್ಟ್‌ಗೆ ಶುಕ್ರವಾರ ಈ ಹೇಳಿಕೆಯನ್ನು ಸಲ್ಲಿಸಿದೆ.

ರಾಜ್ಯದಾದ್ಯಂತ ಇರುವ ವೈದ್ಯಕೀಯ ಕಾಲೇಜುಗಳ ಸ್ಥಾಪನೆಗಾಗಿ ಸರ್ಕಾರ ಸಾಕಷ್ಟು ಪ್ರಮಾಣದ ಬಂಡವಾಳ ಹೂಡಿದ್ದು, ಕೇಂದ್ರ ಸರ್ಕಾರದ ಹಣಕಾಸಿನ ನೆರವು ಪಡೆದಿಲ್ಲ. ವಿವಿಧ ಜಿಲ್ಲೆಗಳಲ್ಲಿ ಇನ್ನೂ 14 ವೈದ್ಯಕೀಯ ಕಾಲೇಜು ಹಾಗೂ 8 ಸೂಪರ್ ಸ್ಪೆಷಾಲಿಟಿ ಆಸ್ಪತ್ರೆಗಳನ್ನು ಆರಂಭಿಸುವ ಉದ್ದೇಶ ಇದ್ದು, ಇವುಗಳನ್ನು ನಡೆಸಲು ಸಾಕಷ್ಟು ಪ್ರಮಾಣದ ತಜ್ಞ ವೈದ್ಯರು ಹಾಗೂ ವೈದ್ಯಕೀಯ ಉಪನ್ಯಾಸಕರ ಅಗತ್ಯವಿದೆ ಎಂದು ಕೋರ್ಟ್‌ಗೆ ಸಲ್ಲಿಸಿರುವ ಹೇಳಿಕೆಯಲ್ಲಿ ತಿಳಿಸಲಾಗಿದೆ.

ವೈದ್ಯಕೀಯ ಶಿಕ್ಷಣವನ್ನು ಬಲಪಡಿಸುವ ನಿಟ್ಟಿನಲ್ಲಿ ರಾಜ್ಯ ಸರ್ಕಾರ ಪ್ರತಿ ವರ್ಷ ಅಂದಾಜು ₹ 2,000 ಕೋಟಿ ವ್ಯಯಿಸುತ್ತಿದ್ದು, ವೈದ್ಯಕೀಯ ಸ್ನಾತಕೋತ್ತರ ಶಿಕ್ಷಣ ಕ್ಷೇತ್ರಕ್ಕೆ ಅಗತ್ಯವಿರುವ ಮೂಲ ಸೌಲಭ್ಯಗಳ ಅಭಿವೃದ್ಧಿಗಾಗಿ ಕೇಂದ್ರ ಸರ್ಕಾರ ಯಾವುದೇ ರೀತಿಯ ನೆರವನ್ನು ನೀಡುತ್ತಿಲ್ಲ. ಅಲ್ಲದೆ, ಈ ಸಂಸ್ಥೆಗಳಲ್ಲಿ ಕಾರ್ಯ ನಿರ್ವಹಿಸುವ ಮಾನವ ಸಂಪನ್ಮೂಲ ರಾಜ್ಯದಿಂದಲೇ ಲಭ್ಯವಾಗಲಿದೆ ಎಂದೂ ವಿವರಿಸಲಾಗಿದೆ.

ಈ ಕಾರಣಗಳಿಂದಾಗಿ ರಾಜ್ಯದಲ್ಲಿಯೇ ಸೇವೆ ಸಲ್ಲಿಸುವ ಅಭ್ಯರ್ಥಿಗಳ ಪ್ರವೇಶಕ್ಕೇ ಆದ್ಯತೆ ನೀಡುವ ಅಗತ್ಯವಿದ್ದು, ರಾಜ್ಯ ಸರ್ಕಾರಕ್ಕೆ ಮಾನದಂಡ ರೂಪಿಸುವ ಸಂಪೂರ್ಣ ಹಕ್ಕು ಇದೆ. ಮಧ್ಯಪ್ರದೇಶ, ಕೇರಳ, ಆಂಧ್ರಪ್ರದೇಶ ಮತ್ತು ಪಶ್ಚಿಮ ಬಂಗಾಳಗಳಲ್ಲೂ ಇದೇ ಮಾದರಿಯ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ ಎಂದು ಸರ್ಕಾರ ಪ್ರತಿಪಾದಿಸಿದೆ.

ಮೆರಿಟ್ ಆಧಾರದಲ್ಲಿ ಸಹಾಯಧನದ ಸೌಲಭ್ಯದ ಸೀಟು ಪಡೆಯುವ ರಾಜ್ಯದ ವಿದ್ಯಾರ್ಥಿಗಳಿಗೂ, ಸ್ಥಳೀಯ ಜನರ ಸೇವೆಗೆ ಸಿದ್ಧರಿರಬೇಕು ಎಂಬ ಷರತ್ತು ವಿಧಿಸಲಾಗುತ್ತದೆ. ಈ ಮೂಲಕ ರಾಜ್ಯದಲ್ಲಿರುವ ವೈದ್ಯಕೀಯ ಹಾಗೂ ದಂತ ವೈದ್ಯಕೀಯ ಶಿಕ್ಷಣ ಸಂಸ್ಥೆಗಳು ಅಗತ್ಯ ತಜ್ಞರನ್ನು ಹೊಂದುವುದಕ್ಕೆ ಅನುಕೂಲ ಕಲ್ಪಿಸಲಾಗುತ್ತದೆ. ದೇಶದ ಇತರ ಭಾಗದ ವಿದ್ಯಾರ್ಥಿಗಳು ಕರ್ನಾಟಕದಲ್ಲಿನ ವೈದ್ಯಕೀಯ ಅಥವಾ ದಂತ ವೈದ್ಯಕೀಯ ಕಾಲೇಜುಗಳಿಂದ ಪದವಿ ಪಡೆದಿದ್ದರ ಆಧಾರದ ಮೇಲೆ ಯಾವುದೇ ಕಾನೂನು ಅರ್ಹತೆ ಹೊಂದಲು ಸಾಧ್ಯವಿಲ್ಲ ಎಂದು ರಾಜ್ಯ ಸರ್ಕಾರ ಸ್ಪಷ್ಟಪಡಿಸಿದೆ.

ಸರ್ಕಾರಿ ಸೀಟುಗಳನ್ನು ಹೊರತುಪಡಿಸಿಯೂ ಬಾಕಿ ಇರುವ 2,301 ಸೀಟುಗಳನ್ನು ಕರ್ನಾಟಕ ಮೂಲದವರಲ್ಲದ ಅಭ್ಯರ್ಥಿಗಳು ಪಡೆಯಬಹುದಾಗಿದೆ. ರಾಜ್ಯದ 11,615 ಸರ್ಕಾರಿ ಆಸ್ಪತ್ರೆಗಳಲ್ಲಿ ತಜ್ಞ ವೈದ್ಯರ 3,435 ಹುದ್ದೆಗಳ ಪೈಕಿ 1,312 ಹುದ್ದೆಗಳು ಖಾಲಿ ಇವೆ. ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ 2,700 ತಜ್ಞರ ಹುದ್ದೆಗಳ ಪೈಕಿ 517 ಹುದ್ದೆಗಳು ಖಾಲಿ ಇವೆ. ರಾಜ್ಯದಲ್ಲಿ ಇರುವ ಒಟ್ಟು 39 ವೈದ್ಯಕೀಯ ಶಿಕ್ಷಣ ಸಂಸ್ಥೆಗಳಲ್ಲಿ ಸರ್ಕಾರದ 16 ಸಂಸ್ಥೆಗಳಿದ್ದು, ಒಟ್ಟು 970 ಹಿರಿಯ ವೈದ್ಯರ ಹುದ್ದೆಗಳಲ್ಲಿ 524 ಹುದ್ದೆಗಳು ಖಾಲಿ ಇವೆ ಎಂದು ತಿಳಿಸಲಾಗಿದೆ.

## ಅಂಕಿ-ಅಂಶಗಳು

**4,129**
ರಾಜ್ಯದ ಶಿಕ್ಷಣ ಸಂಸ್ಥೆಗಳಲ್ಲಿ ಲಭ್ಯವಿರುವ ವೈದ್ಯಕೀಯ, ದಂತ ವೈದ್ಯಕೀಯ ಸ್ನಾತಕೋತ್ತರ ಸೀಟುಗಳು

**14,096**
ಮಾರ್ಚ್ 16ರವರೆಗೆ ನೋಂದಣಿ ಮಾಡಿಸಿರುವ ವಿದ್ಯಾರ್ಥಿಗಳ ಸಂಖ್ಯೆ

**4,093**
ಲಭ್ಯವಿರುವ 1,828 ಸರ್ಕಾರಿ ಸೀಟುಗಳಿಗೆ ಅರ್ಜಿ ಸಲ್ಲಿಸಿರುವ ಕರ್ನಾಟಕ ಮೂಲದ ವಿದ್ಯಾರ್ಥಿಗಳು

**10,003**
ಅರ್ಜಿ ಸಲ್ಲಿಸಿರುವ ಇತರ ರಾಜ್ಯಗಳ ವಿದ್ಯಾರ್ಥಿಗಳು. ಇವರಲ್ಲಿ 1,263 ವಿದ್ಯಾರ್ಥಿಗಳು ರಾಜೀವ್‌ಗಾಂಧಿ ಆರೋಗ್ಯ ವಿಜ್ಞಾನ ಸಂಸ್ಥೆಯಡಿ ಇರುವ ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳಲ್ಲಿ ಪದವಿ ಪಡೆದಿದ್ದಾರೆ.

**50%**
ಕರ್ನಾಟಕ ಮೂಲದ ವಿದ್ಯಾರ್ಥಿಗಳು ಸರ್ಕಾರಿ ಹಾಗೂ ಖಾಸಗಿ ಕಾಲೇಜುಗಳಲ್ಲಿ ಶೇ 50ರಷ್ಟು ಸರ್ಕಾರಿ ಕೋಟಾದ ಸೀಟುಗಳನ್ನು ಪಡೆಯಬಹುದು. ಇತರ ಶೇ 50ರಷ್ಟು ಸೀಟುಗಳು ಖಾಸಗಿ ಕೋಟಾಗೆ ಮೀಸಲಾಗಿವೆ

Bengaluru